ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 16–12–2020

# ಪತ್ರಿಕಾ ಪ್ರಕಟಣೆ

## ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ನವೀಕೃತ ಕಚೇರಿ

ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ) :

ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ನವೀಕೃತ ಕಚೇರಿಯನ್ನು ದಿನಾಂಕ 29–12–2020 ರಂದು ಬೆಳಿಗ್ಗೆ 11–00 ಗಂಟೆಗೆ ಉಪ ಮುಖ್ಯಮಂತ್ರಿ ಡಾ: ಸಿ. ಎನ್. ಅಶ್ವಥ್ ನಾರಾಯಣ್ ಅವರು ಉದ್ಘಾಟಿಸಲಿದ್ದಾರೆ. ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ಕೆ. ರತ್ನಪ್ರಭ (ನಿವೃತ್ತ ಮುಖ್ಯ ಕಾರ್ಯದರ್ಶಿಗಳು) ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಕೌಶಲ್ಯ ತರಬೇತಿಗೆ ಸಂಬಂಧಿಸಿದಂತೆ ಹಲವು ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಕಾರ್ಯಕ್ರಮವು ಸಹ ಜರುಗಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಪರೀಕ್ಷೆ ಮುಂದೂಡಿಕೆ

ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು 21–12–2020 ರಿಂದ 24–12–2020 ರವರೆಗೆ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು ಹುದ್ದೆಗಳ ಮುಖ್ಯ ಪರೀಕ್ಷೆಯನ್ನು ನಡೆಸಲು ನಿರ್ಧರಿಸಿತ್ತು. ಅಂದು ಗ್ರಾಮ ಪಂಚಾಯತಿ ಚುನಾವಣೆ ಇರುವ ಹಿನ್ನೆಲೆಯಲ್ಲಿ ದಿನಾಂಕ 22–12–2020 ರ ಪರೀಕ್ಷೆಯನ್ನು ಮಾತ್ರ ದಿನಾಂಕ 28–12–2020 ಕ್ಕೆ ಮುಂದೂಡಲಾಗಿದೆ. ಉಳಿದ ಪರೀಕ್ಷೆಗಳು ನಿಗದಿಪಡಿಸಿದಂತೆ ನಡೆಯಲಿವೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗದ 23-02-2018ರಲ್ಲಿ ಅಧಿಸೂಚಿಸಲಾಗಿದ್ದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಲ್ಲಿನ ಗ್ರೂಪ್ 'ಬಿ' ವೃಂದದ 'ಸಹಾಯಕ ವೈಜ್ಞಾನಿಕ ಅಧಿಕಾರಿ' – 03(ಹೈ.ಕ) ಮತ್ತು 'ಕಾನೂನು ಸಹಾಯಕ' – 01(ಹೈ.ಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ಕಟ್-ಆಫ್ ಅಂಕಗಳೊಂದಿಗೆ ದಿನಾಂಕ: 15-12-2020ರಂದು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲ http://kpsc.kar.nic.inನಲ್ಲಿ ಪ್ರಕಟಿಸಲಾಗಿದೆ. ಈ ಸಂಬಂಧ ಆಕ್ಷೇಪಣೆಗಳಿದ್ದಲ್ಲಿ, ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಲಾದ ದಿನಾಂಕದಿಂದ 7 ದಿನಗಳೊಳಗಾಗಿ 'ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01' ಇವರಿಗೆ ಸಲ್ಲಿಸಬಹುದಾಗಿದೆ.

## ಶೋಕ ಸಂದೇಶ

ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ) :

ಮೂರು ಬಾರಿ ಶಾಸಕರಾಗಿಯೂ ಮತ್ತು ಮಾಜಿ ರೇಷ್ಮೆ ಸಚಿವೆ ಶ್ರೀಮತಿ ರೇಣುಕಾ ರಾಜೇಂದ್ರನ್ ಅವರ ನಿಧನಕ್ಕೆ ಕರ್ನಾಟಕ ವಿಧಾನ ಸಭೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅವರ ನಿಧನದಿಂದ ಕ್ಷೇತ್ರದ ಜನತೆಗೆ ಹಾಗೂ ಸಮಾಜಕ್ಕೆ ತುಂಬಲಾದರ ನಷ್ಟವುಂಟಾಗಿದೆ ಅವರ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಭಗವಂತನಲ್ಲಿ ಅವರು ಪ್ರಾರ್ಥಿಸಿದ್ದಾರೆ.

## TIME EXTENDED

**Bengaluru, December 16 (Karnataka Information)**

**THE LAST DATE FOR THE SUBMISSION OF JAWAHAR NAVODAYA VIDYALAYA SELECTION TEST 2021 APPLICATION FORM FOR ADMISSION INTO CLASS VI THROUGH ONLINE IN**

**WEBSITE www.navodaya.gov.in FOR THE ACADEMIC YEAR 2021-22 HAS BEEN EXTENDED FROM 15TH DECEMBER 2020 TO 29th DECEMBER 2020. THE CORRECTION WINDOW WILL REMAIN OPENED ON 30 AND 31ST DECEMBER 2020. For more information Contact Vidyalaya Phone No.8746985884**

## ಅವಧಿ ವಿಸ್ತರಣೆ

**ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ) :**

ತರಗತಿಗೆ 2021-22 ನೇ ಸಾಲಿನ ಜವಾಹರ್ ನವೋದಯ ವಿದ್ಯಾಲಯದ 6 ನೇ ತರಗತಿ ಪ್ರವೇಶ ಪರೀಕ್ಷೆಗೆ ಸಮಿತಿಯ ವೆಬ್ ಸೈಟ್ **www.navodaya.gov.in** ನಲ್ಲಿ **ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 15.12.2020 ರಿಂದ 29.12.2020 ರವರೆಗೆ ವಿಸ್ತರಿಸಲಾಗಿದೆ. ತಪ್ಪಾಗಿರುವ ಅರ್ಜಿಗಳ ತಿದ್ದುಪಡಿಗಾಗಿ ದಿನಾಂಕ 30 ಹಾಗೂ 31ನೇ ಡಿಸೆಂಬರ್ 2020 ರಂದು ಅವಕಾಶವಿರುತ್ತದೆ.**

ಹೆಚ್ಚಿನ ಮಾಹಿತಿಗಾಗಿ ಸಮಿತಿಯ ವೆಬ್ ಸೈಟ್ **www.navodaya.gov.in** ಅಥವಾ ವಿದ್ಯಾಲಯದ ದೂರವಾಣಿ ಸಂಖ್ಯೆ **8746985884** ಗೆ ಸಂಪರ್ಕಿಸುವುದು.

## 2019 ನೇ ಸಾಲಿನ ನಾಟಕ ಅಕಾಡೆಮಿಯ ಪುಸ್ತಕ ಬಹುಮಾನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ) :**

ಕರ್ನಾಟಕ ನಾಟಕ ಅಕಾಡೆಮಿಯು 2019ನೇ ಸಾಲಿನಲ್ಲಿ ಪ್ರಕಟವಾಗಿರುವ ರಂಗಭೂಮಿಗೆ ಸಂಬಂಧಿಸಿದ ಕೃತಿಗಳಿಗೆ (ನಾಟಕ ರಚನೆ ಹೊರತುಪಡಿಸಿ) ಪುಸ್ತಕ ಬಹುಮಾನ ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಆಸಕ್ತ ಲೇಖಕರು ತಮ್ಮ ಹೆಸರು, ವಿಳಾಸ, ಪ್ರಕಟಣೆ ವರ್ಷ ನೀಡಿ, ಪುಸ್ತಕದ ನಾಲ್ಕು ಪ್ರತಿಗಳೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ನಾಟಕ ಅಕಾಡೆಮಿ, ಚಾಲುಕ್ಯ ವಿಭಾಗ, ಕನ್ನಡಭವನ, ಜೆ.ಸಿ.ರಸ್ತೆ, ಬೆಂಗಳೂರು-560002. ಇವರಿಗೆ ದಿನಾಂಕ :04/01/2021 ರೊಳಗಾಗಿ ಸಲ್ಲಿಸಲು

ಕೋರಲಾಗಿದೆ. ಹೆಚ್ಚಿನ ವಿವರಗಳನ್ನು ಕಛೇರಿ ವೇಳೆಯಲ್ಲಿ ಅಕಾಡೆಮಿಯಿಂದ ಪಡೆಯಬಹುದು. ದೂರವಾಣಿ : 080 : 22237484.

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :16.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 107 | Moderate | $PM_{10}$ |
| 2 | Jayanagar 5th Block, Shalini ground | 105 | Moderate | $PM_{10}$ |
| 3 | KAVIKA, Mysore Road | 107 | Moderate | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 79 | Satisfactory | $PM_{10}$ |
| 5 | HSR Layout, near Central Silkboard | 84 | Satisfactory | $PM_{2.5}$ |
| 6 | City Railway Station, Magestic, Bengaluru | 98 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 58 | Satisfactory | CO |
| 8 | BWSSB, Kadabesanahalli | 96 | Satisfactory | $PM_{2.5}$ |
| 9 | Peenya | 82 | Satisfactory | $O_3$ |

| 10 | BTM Layout | 58 | Satisfactory | $O_3$ |
|---|---|---|---|---|

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

# ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ

## ಪರಿಸರ ಭವನ, ಬೆಂಗಳೂರು.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 16.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 107 | ಸಾಧಾರಣ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 105 | ಸಾಧಾರಣ | $PM_{10}$ |
| 3 | ಕವಿಕ, ಮೈಸೂರುರಸ್ತೆ | 107 | ಸಾಧಾರಣ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 79 | ತೃಪ್ತಿಕರ | $PM_{10}$ |

| | | | | |
|---|---|---|---|---|
| 5 | ಹೆಚ್.ಎಸ್.ಆರ್ ಲೇಔಟ್,<br><br>ಕೇಂದ್ರರೇಷ್ಮೆ ಮಂಡಳಿ ಹತ್ತಿರ | 84 | ತೃಪ್ತಿಕರ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 98 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 58 | ತೃಪ್ತಿಕರ | CO |
| 8 | BWSSB, ಕಾಡಬೀಸನಹಳ್ಳಿ | 96 | ತೃಪ್ತಿಕರ | $PM_{2.5}$ |
| 9 | ಪೀಣ್ಯ | 82 | ತೃಪ್ತಿಕರ | $O_3$ |
| 10 | ಬಿಟಿಎಂ ಲೇಔಟ್ | 58 | ತೃಪ್ತಿಕರ | $O_3$ |

| **ವರ್ಗ(ಶ್ರೇಣಿ)** | **ಉಂಟಾಗಬಹುದಾದಆರೋಗ್ಯ ಪರಿಣಾಮಗಳು** |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |